# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ

**6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-3.**

ಸಂಖ್ಯೆ: 75659/KSEAB/DOE/X1(EXAM)/6/2025-X-SEC ದಿನಾಂಕ:09/09/2025.

**-: ಅಧಿಸೂಚನೆ :-**

**ವಿಷಯ:** ಡಿಸೆಂಬರ್-2025ರ ಮಾಹೆಯಲ್ಲಿ ನಡೆಯಲಿರುವ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

******

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯಿಂದ ಡಿಸೆಂಬರ್-2025ರ ಮಾಹೆಯಲ್ಲಿ ನಡೆಯುವ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ಕಾಲೇಜುಗಳಿಂದ ಹಾಜರಾಗುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಇದಲ್ಲದೆ ಖಾಸಗಿ ಅಭ್ಯರ್ಥಿಗಳು ಸಹ ಈ ಪರೀಕ್ಷೆಗೆ ಹಾಜರಾಗಲು ಅರ್ಜಿಗಳನ್ನು ಸಮೀಪದ ಪರೀಕ್ಷಾ ಕೇಂದ್ರದ ಮುಖಾಂತರ ಸಲ್ಲಿಸಬಹುದಾಗಿದೆ. ಸದರಿ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ತಮ್ಮ ಪರೀಕ್ಷಾ ಕೇಂದ್ರದಲ್ಲಿ ಹಾಜರಾಗುವ ಅರ್ಹ ಅಭ್ಯರ್ಥಿಗಳು ಹಾಗೂ ಖಾಸಗಿ ಅಭ್ಯರ್ಥಿಗಳ ವಿವರಗಳನ್ನು ಮಂಡಲಿಯ ಜಾಲತಾಣ **https://kseab.karnataka.gov.in/** ದಲ್ಲಿ Login/Other Exams Portal/Drawing Examinationನಲ್ಲಿ Center Login ಮೂಲಕ Upload ಮಾಡಲು ಸೂಚಿಸಿದೆ. ರಾಜ್ಯದಲ್ಲಿರುವ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲಾ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳಿಗೆ SATS ಸಂಖ್ಯೆ ಲಭ್ಯವಿರುತ್ತದೆ, ಈ ಅಭ್ಯರ್ಥಿಗಳನ್ನು ರೆಗ್ಯುಲರ್ ಅಭ್ಯರ್ಥಿಗಳೆಂದು ಪರಿಗಣಿಸಲಾಗುವುದು. SATS ಸಂಖ್ಯೆ ಇಲ್ಲದ ಅಭ್ಯರ್ಥಿಗಳನ್ನು ಖಾಸಗಿ ಅಭ್ಯರ್ಥಿಗಳೆಂದು ಪರಿಗಣಿಸಲಾಗುವುದು.

**ಡ್ರಾಯಿಂಗ್ ಗ್ರೇಡ್ ಪರೀಕ್ಷೆ ತೆಗೆದುಕೊಳ್ಳಲು ಅಗತ್ಯವಿರುವ ಅರ್ಹತೆ:-**

- ಡ್ರಾಯಿಂಗ್ ಗ್ರೇಡ್ ಪರೀಕ್ಷೆ ತೆಗೆದುಕೊಳ್ಳಲು ರೆಗ್ಯುಲರ್ ಹಾಗೂ ಖಾಸಗಿ ಅಭ್ಯರ್ಥಿಗಳು 7ನೇ ತರಗತಿ ಉತ್ತೀರ್ಣರಾಗಿರಬೇಕು.
- ಪ್ರಸ್ತುತ 8, 9, 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ SATS ಸಂಖ್ಯೆ ಹೊಂದಿರುವ ಅಭ್ಯರ್ಥಿಗಳು ಶಾಲೆಯ ದಾಖಲಾತಿ ವಹಿಯ ಪ್ರಕಾರ ಸಾಟ್ಸ್‌ನಲ್ಲಿ ಅಪ್ ಡೇಟ್ ಮಾಡಿಸಿ ಪರೀಕ್ಷೆ ತೆಗೆದುಕೊಳ್ಳಬಹುದು.
- ಖಾಸಗಿ ಅಭ್ಯರ್ಥಿಗಳು ಸಹ ಪರೀಕ್ಷೆ ತೆಗೆದುಕೊಳ್ಳಲು ಅವಕಾಶವಿದೆ.
- ಡ್ರಾಯಿಂಗ್ ಗ್ರೇಡ್ ಪರೀಕ್ಷೆಯಲ್ಲಿ ಲೋಯರ್ ಮತ್ತು ಹೈಯರ್ ಎಂಬ ಎರಡು ಪರೀಕ್ಷೆಗಳಿರುತ್ತವೆ. ಅಭ್ಯರ್ಥಿಗಳು ಲೋಯರ್ ಗ್ರೇಡ್ ಪರೀಕ್ಷೆ ತೆಗೆದುಕೊಳ್ಳದೆಯೇ ನೇರವಾಗಿ ಹೈಯರ್ ಗ್ರೇಡ್ ಪರೀಕ್ಷೆ ತೆಗೆದುಕೊಳ್ಳಬಹುದು. ಆದರೆ ಎರಡೂ ಪರೀಕ್ಷೆಗಳನ್ನು ಒಂದೇ ಬಾರಿ ತೆಗೆದುಕೊಳ್ಳಲು ಅವಕಾಶವಿಲ್ಲ.
- ಪರೀಕ್ಷೆಗೆ ಮಂಡಲಿಯಿಂದ ಅನುಮೋದಿಸಲ್ಪಟ್ಟ ಪರೀಕ್ಷಾ ಕೇಂದ್ರಗಳ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ನೋಂದಾಯಿಸಿಕೊಳ್ಳಲು ಅವಕಾಶವಿದೆ. ಪ್ರತಿ ಕೇಂದ್ರದಲ್ಲೂ ಕನಿಷ್ಠ 100 ಅಭ್ಯರ್ಥಿಗಳಿರಬೇಕು. 100 ಅಭ್ಯರ್ಥಿಗಳಿಗಿಂತ ಕಡಿಮೆ ನೋಂದಾವಣೆಯಾದಲ್ಲಿ ಹತ್ತಿರದ ಬೇರೆ ಕೇಂದ್ರಕ್ಕೆ ಟ್ಯಾಗ್ ಮಾಡಲಾಗುವುದು.

➢ ಅಭ್ಯರ್ಥಿಗಳು ವ್ಯಾಸಂಗ ಮಾಡುತ್ತಿರುವ ಜಿಲ್ಲಾ ವ್ಯಾಪ್ತಿಯಲ್ಲಿನ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆಗೆ ಆನ್‌ಲೈನ್ ಅರ್ಜಿಯನ್ನು ಸಲ್ಲಿಸಬಹುದು.

**ಪರೀಕ್ಷಾ ವಿಷಯ ಮತ್ತು ಪರೀಕ್ಷಾ ಶುಲ್ಕ ವಿವರ**

| ಕ್ರ ಸಂ | ಪರೀಕ್ಷಾ ವಿಷಯ | ವಿಷಯ ಸಂಕೇತ | ಪರೀಕ್ಷಾ ಶುಲ್ಕ ವಿವರ | | ಒಟ್ಟು ಶುಲ್ಕ |
|---|---|---|---|---|---|
| | | | ಪರೀಕ್ಷಾ ಶುಲ್ಕ | ಅರ್ಜಿ ಶುಲ್ಕ | |
| 01 | ಡ್ರಾಯಿಂಗ್ ಗ್ರೇಡ್ ಲೋಯರ್ | ಎಲ್ | 260–00 | 20–00 | 280–00 |
| 02 | ಡ್ರಾಯಿಂಗ್ ಗ್ರೇಡ್ ಹೈಯರ್ | ಹೆಚ್ | 260–00 | 20–00 | 280–00 |

ಪರಿಶಿಷ್ಟಜಾತಿ ಮತ್ತು ಪರಿಶಿಷ್ಟಪಂಗಡದ ಅಭ್ಯರ್ಥಿಗಳಿಗೆ ಪರೀಕ್ಷಾ ಶುಲ್ಕದಿಂದ ವಿನಾಯಿತಿ ಇದ್ದು, ಅರ್ಜಿ ಶುಲ್ಕ ಒಟ್ಟು ರೂ. 20–00ಗಳನ್ನು ಪಾವತಿಸಬೇಕಾಗಿರುತ್ತದೆ.

ಪರಿಶಿಷ್ಟಜಾತಿ ಮತ್ತು ಪರಿಶಿಷ್ಟಪಂಗಡದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರು ನೀಡಿರುವ ಜಾತಿ/ಆದಾಯ ಪ್ರಮಾಣಪತ್ರದ ಜೆರಾಕ್ಸ್ ಪ್ರತಿಯನ್ನು ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಪಡೆದು ದೃಢೀಕರಿಸಿ, ತಮ್ಮ ಅಧೀನದಲ್ಲಿಯೇ ಸಂರಕ್ಷಿಸಲು ತಿಳಿಸಿದೆ. ಯಾವುದೇ ಕಾರಣಕ್ಕೂ ಜಾತಿ/ಆದಾಯ ಪ್ರಮಾಣಪತ್ರಗಳನ್ನು ಮಂಡಲಿಗೆ ಕಳುಹಿಸುವಂತಿಲ್ಲ.

**ಪರೀಕ್ಷಾ ಶುಲ್ಕ ಹಾಗೂ ಅರ್ಜಿಗಳನ್ನು ಸಲ್ಲಿಸಲು ನಿಗಧಿಗೊಳಿಸಿರುವ ದಿನಾಂಕಗಳ ವಿವರ**

| ಕ್ರ ಸಂ | ವಿವರ | ನಿಗಧಿಪಡಿಸಿರುವ ದಿನಾಂಕ |
|---|---|---|
| 1. | ಮಂಡಲಿ ಜಾಲತಾಣದ Center Login ಮೂಲಕ ಅಭ್ಯರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು **ಪ್ರಾರಂಭದ ದಿನಾಂಕ** | 10/09/2025 |
| 2. | ಮಂಡಲಿ ಜಾಲತಾಣದ Center Login ಮೂಲಕ ಅಭ್ಯರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು **ಅಂತಿಮ ದಿನಾಂಕ** | 15/10/2025 |
| 3. | ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಸಲ್ಲಿಸಿದ ನಾಮಿನಲ್ ರೋಲ್, ಮತ್ತು ಸಂಬಂಧಿಸಿದ ಇತರೆ ದಾಖಲೆಗಳನ್ನು ಡಯಟ್ ಲಾಗಿನ್‌ನಲ್ಲಿ ಉಪನಿರ್ದೇಶಕರು (ಅಭಿವೃದ್ಧಿ)ರವರು ಅನುಮೋದಿಸುವುದು. (ಕೇಂದ್ರದಿಂದ ಸಲ್ಲಿಸಿದ ಮಾಹಿತಿಯನ್ನು ಡಯಟ್ ಹಂತದಲ್ಲಿ ಕಾಯ್ದಿರಿಸುವುದು) | 16/10/2025 ರಿಂದ 19/10/2025 |
| 4. | ಮಂಡಲಿ ಜಾಲತಾಣದಲ್ಲಿ ಸಂಬಂಧಿಸಿದ Center Login ಮೂಲಕ ಅಭ್ಯರ್ಥಿಗಳ ಪರೀಕ್ಷಾ ಶುಲ್ಕವನ್ನು ಆನ್‌ಲೈನ್ ಮೂಲಕ **ಜಮಾ ಮಾಡುವುದು**. ಆನ್‌ಲೈನ್ (Debit Card/Credit Card/Net Banking) ಮೂಲಕ ಪಾವತಿಸುವುದು. | 16/10/2025 ರಿಂದ 20/10/2025 |
| 5. | ಪರೀಕ್ಷಾ ಕೇಂದ್ರದ ಮುಖ್ಯಸ್ಥರು ನಾಮಿನಲ್ ರೋಲ್, ಮತ್ತು ಸಂಬಂಧಿಸಿದ ಇತರೆ ದಾಖಲೆಗಳನ್ನು ಡಯಟ್‌ಗೆ ಕಳುಹಿಸಲು ಕೊನೆಯ ದಿನಾಂಕ | 22/10/2025 ರಿಂದ 29–10–2025 |

## ಪರೀಕ್ಷಾ ಶುಲ್ಕ ಪಾವತಿಸುವ ವಿಧಾನ

ಅಭ್ಯರ್ಥಿಗಳ ಪರೀಕ್ಷಾ ನೋಂದಣಿಯನ್ನು ಮಂಡಲಿಯ ಜಾಲತಾಣದಲ್ಲಿ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಲಾಗಿನ್ ಆಗುವ Center Login ಮೂಲಕ Upload ಮಾಡಬೇಕು. ನಿಗದಿಪಡಿಸಿದ ಅವಧಿಯೊಳಗೆ ನೋಂದಣಿ ಪ್ರಕ್ರಿಯೆ ಪೂರ್ಣಗೊಂಡು ಡಯಟ್‌ಗಳಿಂದ ಅರ್ಜಿಗಳನ್ನು ಅನುಮೋದಿಸಿದ ನಂತರ ಕೇಂದ್ರವಾರು ಪರೀಕ್ಷಾ ಶುಲ್ಕಪಾವತಿಗೆ ಸಂಬಂಧಪಟ್ಟಂತೆ ಆನ್‌ಲೈನ್ Payment gateway ವ್ಯವಸ್ಥೆ ಮಾಡಲಾಗಿದೆ.

## ಆನ್‌ಲೈನ್ ಮೂಲಕ ಶುಲ್ಕ ಪಾವತಿಸುವ ವಿಧಾನ

- ಪರೀಕ್ಷಾ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸಲು ಅವಕಾಶ ಕಲ್ಪಿಸಿದ್ದು ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ನೆಟ್ ಬ್ಯಾಂಕಿಂಗ್ ಮೂಲಕ ಶುಲ್ಕ ಪಾವತಿಸಬೇಕಾಗಿರುತ್ತದೆ.

  ಪರೀಕ್ಷಾ ಶುಲ್ಕವನ್ನು ಕಡ್ಡಾಯವಾಗಿ ಆನ್‌ಲೈನ್ ಮುಖಾಂತರ ಪಾವತಿಸಬೇಕಾಗಿರುತ್ತದೆ.

## ವಿಭಿನ್ನ ಸಾಮರ್ಥ್ಯವುಳ್ಳ (Differently abled) ಅಭ್ಯರ್ಥಿಗಳಿಗೆ ನೀಡುವ ವಿನಾಯಿತಿ.

- ಕಿವುಡ, ಮೂಕ ಅಭ್ಯರ್ಥಿಗಳು (ಲೋಯರ್ ಮತ್ತು ಹೈಯರ್) ರೇಖಾನಕ್ಷೆಗೆ (Geometrical Drawing) ಬದಲಾಗಿ ಈ ಕೆಳಗೆ ತಿಳಿಸಿದಂತೆ ಪರೀಕ್ಷೆ ತೆಗೆದುಕೊಳ್ಳಬೇಕಾಗುತ್ತದೆ.
- ಲೋಯರ್ ಗ್ರೇಡ್:- ನಿಗದಿಪಡಿಸಿದ ಚಿತ್ರವನ್ನು ಸೀಸದ ಕಡ್ಡಿಯಿಂದ ಬಿಡಿಸುವುದು. (Geometrical Drawing).
- ಹೈಯರ್ ಗ್ರೇಡ್:- ನಿಗದಿಪಡಿಸಿದ ಚಿತ್ರವನ್ನು ಸೀಸದ ಕಡ್ಡಿಯಿಂದ ಬಿಡಿಸುವುದು. (Geometrical Drawing, Lettering and Scale Drawing).

## ಅರ್ಜಿಗಳನ್ನು ಸಲ್ಲಿಸಲು ಕೇಂದ್ರದ ಮುಖ್ಯಸ್ಥರು ಪಾಲಿಸಬೇಕಾದ ಸೂಚನೆಗಳು:-

1. ಡಿಸೆಂಬರ್-2025ರ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ನೋಂದಣಿ ಮಾಹಿತಿಯನ್ನು ಮಂಡಲಿಯ ಜಾಲತಾಣದ Center Login ಮುಖಾಂತರ ಅಪ್‌ಲೋಡ್ ಮಾಡುವುದು.
2. 8 ರಿಂದ 10ನೇ ತರಗತಿಯವರೆಗೆ ಮುಖ್ಯವಾಹಿನಿಯಲ್ಲಿ ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳ SATS ಸಂಖ್ಯೆಯ ಮೂಲಕ (SATS NUMBER) ಅರ್ಜಿಗಳನ್ನು ಸಲ್ಲಿಸುವುದು ಕಡ್ಡಾಯವಾಗಿದೆ. ಅರ್ಜಿಯಲ್ಲಿ SATS ಸಂಖ್ಯೆಯನ್ನು ನಮೂದಿಸಿದಾಗ SATS ಮಾಹಿತಿಗಳು AUTO FETCH ಆಗುತ್ತವೆ. ಉಳಿದ ಮಾಹಿತಿಗಳನ್ನು ಕೇಂದ್ರದ ಮುಖ್ಯಸ್ಥರು ಭರ್ತಿ ಮಾಡುವುದು.

3. ಖಾಸಗಿ ಅಭ್ಯರ್ಥಿಗಳು ಮಂಡಳಿಯ ಜಾಲತಾಣದ Center Login ಮೂಲಕ ಅರ್ಜಿಗಳನ್ನು ಸಲ್ಲಿಸುವುದು. ಸದರಿ ಅಭ್ಯರ್ಥಿಗಳ ಎಲ್ಲಾ ಮಾಹಿತಿಗಳನ್ನು ಕೇಂದ್ರದ ಮುಖ್ಯಸ್ಥರು ಸಂಬಂಧಿಸಿದ ಕಾಲಂಗಳಲ್ಲಿ ತುಂಬುವುದು.

4. ಖಾಸಗಿ ಅಭ್ಯರ್ಥಿಗಳು ಡ್ರಾಯಿಂಗ್ ಗ್ರೇಡ್ ಪರೀಕ್ಷೆ ತೆಗೆದುಕೊಳ್ಳಲು ಕಡ್ಡಾಯವಾಗಿ 7ನೇ ತರಗತಿ ಉತ್ತೀರ್ಣರಾಗಿರಬೇಕು. ಸಂಬಂಧಿಸಿದ ದಾಖಲೆಗಳನ್ನು ಕೇಂದ್ರದ ಮುಖ್ಯಸ್ಥರು ಪರಿಶೀಲಿಸಿ ಆನ್‌ಲೈನ್‌ನಲ್ಲಿ ಅಭ್ಯರ್ಥಿಗಳು ನೀಡಿದ ದಾಖಲೆಗಳನ್ನು ಅಪ್‌ಲೋಡ್ ಮಾಡುವುದು ಹಾಗೂ ಸಂಬಂಧಿಸಿದ ಪ್ರತಿಗಳನ್ನು ತಮ್ಮ ಹಂತದಲ್ಲಿಯೇ ಸಂರಕ್ಷಿಸಿಕೊಳ್ಳುವುದು.

5. **ಪರೀಕ್ಷಾ ಅರ್ಜಿಗಳನ್ನು ಮಂಡಲಿಯ ಜಾಲತಾಣದಲ್ಲಿ Center Login ಮೂಲಕ ಸಲ್ಲಿಸುವ ಸಮಯದಲ್ಲಿ ಅಭ್ಯರ್ಥಿಗಳ ಭಾವಚಿತ್ರ 60 ರಿಂದ 80 KB ಹಾಗೂ ಸಹಿಯನ್ನು 20 ರಿಂದ 50 KB JPEG ನಮೂನೆಯಲ್ಲಿರಬೇಕು. ಭಾವಚಿತ್ರ ನೇರ ಭಂಗಿಯಲ್ಲಿರಬೇಕು ಹಾಗೂ ಭಾವಚಿತ್ರ ಹಾಗೂ ಸಹಿಯನ್ನು ಮಾತ್ರವೇ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡುವುದು. ಭಾವಚಿತ್ರ ಅಂಟಿಸಿರುವ, ಸಹಿಮಾಡಿರುವ ಇಡೀ ಹಾಳೆಯನ್ನು ಸ್ಕ್ಯಾನ್‌ಮಾಡಿ ಅಪ್‌ಲೋಡ್ ಮಾಡುವಂತಿಲ್ಲ. ಭಾವಚಿತ್ರವು ಪಾಸ್‌ಪೋರ್ಟ್ ಅಳತೆಯ ಕಪ್ಪುಬಿಳುಪು ಫೋಟೋ ಅಥವಾ ಬ್ಯಾಕ್ ಗ್ರೌಂಡ್ ಬಿಳಿಬಣ್ಣ ಇರುವ ಭಾವಚಿತ್ರವನ್ನೇ ಕಡ್ಡಾಯವಾಗಿ ಅಪ್‌ಲೋಡ್ ಮಾಡುವುದು, ಒಂದು ವೇಳೆ ಭಾವಚಿತ್ರ ಸ್ಪಷ್ಟತೆ ಇಲ್ಲದೆ ವ್ಯತ್ಯಾಸವಾದಲ್ಲಿ ಮುಂದಿನ ಆಗು ಹೋಗುಗಳಿಗೆ ಕೇಂದ್ರದ ಮುಖ್ಯ ಅಧೀಕ್ಷಕರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.**

6. Tagged ಶಾಲೆಯ ಮುಖ್ಯಸ್ಥರು ಮಂಡಲಿಯಿಂದ ನಿಗದಿಪಡಿಸಿರುವ ಪರೀಕ್ಷಾ ಕೇಂದ್ರಗಳಲ್ಲಿ ತಮಗೆ ಹತ್ತಿರವಿರುವ ಪರೀಕ್ಷಾ ಕೇಂದ್ರದ ಮುಖಾಂತರ ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಮಾಡಿಕೊಡುವುದು.

7. SATS ಸಂಖ್ಯೆ ಹೊಂದಿರುವ ಅಭ್ಯರ್ಥಿಗಳಾಗಿದ್ದಲ್ಲಿ SATS ಮೂಲಕ FETCH ಆದ ಮಾಹಿತಿಗಳನ್ನು ನೇರವಾಗಿ ಮಂಡಲಿ ಜಾಲತಾಣದಲ್ಲಿ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಅಂತಹ ತಿದ್ದುಪಡಿಗಳನ್ನು ಅಭ್ಯರ್ಥಿಗಳು ವ್ಯಾಸಂಗ ಮಾಡುತ್ತಿರುವ ಮೂಲ ಶಾಲೆಯ SATS ಲಾಗಿನ್‌ನಲ್ಲಿ ಅಗತ್ಯ ದಾಖಲೆಗಳೊಂದಿಗೆ ನಿಯಮಾನುಸಾರ ತಿದ್ದುಪಡಿ ಮಾಡಿಕೊಳ್ಳಬಹುದಾಗಿದೆ.

8. SATS ಮೂಲಕ FETCH ಆಗದೇ ಉಳಿದ ಮಾಹಿತಿಗಳನ್ನು ಮಂಡಲಿ ಜಾಲತಾಣದ ಪರೀಕ್ಷಾ ಕೇಂದ್ರದ ಲಾಗಿನ್‌ನಲ್ಲಿ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕದ ಒಳಗೆ ತಿದ್ದುಪಡಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದೆ.

9. ಖಾಸಗಿ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ, ತಿದ್ದುಪಡಿ ಬಯಸಿದ್ದಲ್ಲಿ ನಿಗದಿತ ಅವಧಿಯಲ್ಲಿ ಪೂರಕ ದಾಖಲೆಗಳನ್ನು ಪರಿಶೀಲಿಸಿ, ದೃಢೀಕರಿಸಿಕೊಂಡು ಅಗತ್ಯ ತಿದ್ದುಪಡಿಯನ್ನು ಮಾಡುವುದು.

10. ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಅಂತಿಮ ದಿನಾಂಕದವರೆಗೆ ಅರ್ಜಿಯಲ್ಲಿನ ಭರ್ತಿ ಮಾಡಿದ ಮಾಹಿತಿಗಳಲ್ಲಿನ ತಿದ್ದುಪಡಿಗಳಿಗೆ ಅವಕಾಶ ಕಲ್ಪಿಸಿದೆ. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಅಂತಿಮ ದಿನಾಂಕದ ನಂತರ ತಿದ್ದುಪಡಿಗಳಿಗೆ ಅವಕಾಶವಿರುವುದಿಲ್ಲ.

**11.** ಅಭ್ಯರ್ಥಿಗಳು ಅರ್ಜಿಯನ್ನು ನೋಂದಾಯಿಸಿದ ಪರೀಕ್ಷಾ ಕೇಂದ್ರದ ಲಾಗಿನ್‌ಗೆ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ನೀಡಲಾಗುವುದು. ಪರೀಕ್ಷೆಗೆ ನೋಂದಾಯಿಸಿದ ಅಭ್ಯರ್ಥಿಗಳು ಸದರಿ ಪರೀಕ್ಷಾ ಕೇಂದ್ರದಿಂದಲೇ ಪ್ರವೇಶ ಪತ್ರಗಳನ್ನು ಪಡೆಯುವುದು.

**ಉಪನಿರ್ದೇಶಕರು (ಅಭಿವೃದ್ಧಿ) ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)ರವರ ಜವಾಬ್ದಾರಿಗಳು**

- ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸುವ ಸಂಪೂರ್ಣ ಜವಾಬ್ದಾರಿ ಆಯಾ ಜಿಲ್ಲಾ ಡಯಟ್ ಪ್ರಾಂಶುಪಾಲರವರದ್ದಾಗಿರುತ್ತದೆ.
- ನಿಗಧಿಪಡಿಸಿದ ದಿನಾಂಕಗಳಂದು ಡಯಟ್ ಲಾಗಿನ್‌ನಲ್ಲಿ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವುದು ಕಡ್ಡಾಯವಾಗಿರುತ್ತದೆ.
- ಪರೀಕ್ಷಾ ಕಾರ್ಯಗಳಲ್ಲಿ ತೊಡಗುವ ಜಿಲ್ಲಾ ಹಾಗೂ ತಾಲ್ಲೂಕು ಹಂತದ ಪರೀಕ್ಷಾ ಕೇಂದ್ರದ ಮುಖ್ಯಅಧೀಕ್ಷಕರು ಮತ್ತು ಕೊಠಡಿ ಮೇಲ್ವಿಚಾರಕರುಗಳಿಗೆ ಅಧಿಸೂಚನೆಯಲ್ಲಿರುವ ಎಲ್ಲಾ ಮಾಹಿತಿಗಳನ್ನು ನೀಡುವ ಸಲುವಾಗಿ ಒಂದು ದಿನದ ಪರೀಕ್ಷಾ ಪೂರ್ವ ತರಬೇತಿಯನ್ನು ಆಯೋಜಿಸಿ ಪರೀಕ್ಷೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ಕುರಿತು ಕೈಗೊಂಡ ಕ್ರಮಗಳ ಬಗ್ಗೆ ಕಡ್ಡಾಯವಾಗಿ ಮಂಡಲಿಗೆ ವರದಿ ನೀಡುವುದು.
- ರಾಜ್ಯದ ಎಲ್ಲಾ ಡಯಟ್ ಪ್ರಾಂಶುಪಾಲರು ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುವ ದಿನಗಳಲ್ಲಿ ಪರೀಕ್ಷೆಯು ಸುಸೂತ್ರವಾಗಿ ನಡೆಯುವಂತೆ ಹಾಗೂ ಯಾವುದೇ ಅಹಿತಕರ ಘಟನೆ ನಡೆಯದಂತೆ ನೋಡಿಕೊಳ್ಳುವುದು. ಆಯಾ ದಿನದ ವರದಿಯನ್ನು ಅಂದೇ ಕಡ್ಡಾಯವಾಗಿ ಮಂಡಲಿಗೆ ಇ–ಮೇಲ್ (**adpixsection@gmail.com**) ಮೂಲಕ ಸಲ್ಲಿಸುವುದು.

**ರಾಜ್ಯದ ಎಲ್ಲಾ ಡಯಟ್ ಪ್ರಾಂಶುಪಾಲರು ಹಾಗೂ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರುಗಳಿಗೆ ಅಗತ್ಯಕ್ರಮಕ್ಕಾಗಿ.**

- ಪರೀಕ್ಷಾ ಕೇಂದ್ರದ ಮುಖ್ಯಅಧೀಕ್ಷಕರಾಗಿ ಕಾರ್ಯನಿರ್ವಹಿಸಲು ಪರೀಕ್ಷಾ ಮಂಡಲಿಯಿಂದ ಗುರ್ತಿಸಿರುವ ಪರೀಕ್ಷಾ ಕೇಂದ್ರದ ಮುಖ್ಯಸ್ಥರೇ ಕಾರ್ಯನಿರ್ವಹಿಸುವುದು ಕಡ್ಡಾಯವಾಗಿದೆ. ಒಂದು ವೇಳೆ ಅನಿವಾರ್ಯ ಕಾರಣಗಳಿಂದ ಬೇರೆ ಶಿಕ್ಷಕರನ್ನು ಮುಖ್ಯ ಅಧೀಕ್ಷಕರಾಗಿ ನಿಯೋಜಿಸಬೇಕಾದಲ್ಲಿ ಸಂಬಂಧಿಸಿದ ಡಯಟ್‌ಗಳಿಂದ ಅನುಮೋದನೆ ಪಡೆದು ಮಂಡಲಿಗೆ ಕಳುಹಿಸುವುದು ಕಡ್ಡಾಯವಾಗಿದೆ.
- ಒಂದು ವೇಳೆ ಮುಖ್ಯ ಅಧೀಕ್ಷಕರಾಗಿ ಕಾರ್ಯ ನಿರ್ವಹಿಸಲು ನಿಯೋಜಿಸಲ್ಪಟ್ಟ ಶಿಕ್ಷಕರ ಮಕ್ಕಳು/ ಹತ್ತಿರದ ಸಂಬಂಧಿಕರ ಮಕ್ಕಳು ಸದರಿ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆ ತೆಗೆದುಕೊಂಡಿದ್ದಲ್ಲಿ ಕಡ್ಡಾಯವಾಗಿ ಈ ಮಾಹಿತಿಯನ್ನು ಸಂಬಂಧಿಸಿದ ಡಯಟ್ ಪ್ರಾಂಶುಪಾಲರಿಗೆ ನೀಡಿ ಡಯಟ್‌ನಿಂದ ಅನುಮೋದನೆ ಪಡೆದು ಬೇರೆ ಶಿಕ್ಷಕರನ್ನು ಮುಖ್ಯ ಅಧೀಕ್ಷಕರಾಗಿ ನಿಯೋಜಿಸಿಕೊಂಡು ಮಂಡಲಿಗೆ ವರದಿ ಮಾಡಲು ತಿಳಿಸಿದೆ.
- ಡಯಟ್‌ಗಳಿಂದ ಅನುಮೋದನೆ ಪಡೆಯದೇ ಮುಖ್ಯಅಧೀಕ್ಷಕರಾಗಿ ಕಾರ್ಯನಿರ್ವಹಿಸಿದಲ್ಲಿ ಮುಂದಿನ ಆಗುಹೋಗುಗಳಿಗೆ ಸಂಬಂಧಿಸಿದ ಮುಖ್ಯಅಧೀಕ್ಷಕರನ್ನೇ ನೇರಹೊಣೆಗಾರರನ್ನಾಗಿ ಮಾಡಲಾಗುವುದು ಹಾಗೂ ಮಂಡಲಿ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು.

**ಪರೀಕ್ಷೆಗೆ ಸಂಬಂಧಿಸಿದ ಹೆಚ್ಚಿನ ಮಾಹಿತಿಗಾಗಿ**

ಶ್ರೀಮತಿ. ಅಡಿವೆಪ್ಪ ಯಲ್ಲಪ್ಪ ಅವತಾಳೆ
ಸಹಾಯಕ ನಿರ್ದೇಶಕರು ಮತ್ತು ಶಾಖಾಧಿಕಾರಿಗಳು,
ಚಿತ್ರಕಲಾ ವಿಭಾಗ, 4ನೇ ಮಹಡಿ,
ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ,
6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03
ಮೊಬೈಲ್ ಸಂಖ್ಯೆ: **9449692134/8746987717**
ಇ-ಮೇಲ್ ವಿಳಾಸ: **adpixsection@gmail.com**

| |
|---|
| **ಹೆಚ್ಚಿನ ವಿವರಗಳಿಗಾಗಿ ಈ ಕೆಳಕಂಡ ಮಂಡಲಿಯ ಜಾಲತಾಣದಲ್ಲಿ ನೋಡುವುದು.** |
| **https://kseab.karnataka.gov.in** |

[ಗೋಪಾಲಕೃಷ್ಣ ಹೆಚ್.ಎನ್] 10/9
ನಿರ್ದೇಶಕರು (ಪರೀಕ್ಷೆಗಳು)

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ರವರಿಗೆ ಮಾಹಿತಿಗಾಗಿ.
3. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಹೊಸಕೆರೆಹಳ್ಳಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಕನ್ನಿಕಾಂಮ್ ರಸ್ತೆ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ.
5. ವಿಭಾಗೀಯ ಸಹನಿರ್ದೇಶಕರು ಬೆಂಗಳೂರು/ಮೈಸೂರು/ಬೆಳಗಾವಿ/ಕಲಬುರಗಿ ವಿಭಾಗದವರಿಗೆ ಸೂಕ್ತ ಕ್ರಮಕ್ಕಾಗಿ.
6. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಶಾಲಾ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
7. ರಾಜ್ಯದ ಎಲ್ಲಾ ಜಿಲ್ಲಾ ಡಯಟ್ ಪ್ರಾಂಶುಪಾಲರುಗಳಿಗೆ, ಸೂಕ್ತ ಕ್ರಮಕ್ಕಾಗಿ.
8. ರಾಜ್ಯದ ಎಲ್ಲಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, ಸೂಕ್ತ ಕ್ರಮಕ್ಕಾಗಿ.
9. ಕೇಂದ್ರಗಳ ಎಲ್ಲಾ ಮುಖ್ಯ ಅಧೀಕ್ಷಕರಿಗೆ, ಸೂಕ್ತ ಕ್ರಮಕ್ಕಾಗಿ.
10. ಹಿರಿಯ ಸಹಾಯಕ ನಿರ್ದೇಶಕರು (ಚಿತ್ರಕಲೆ) ಆಯುಕ್ತರ ಕಛೇರಿ, ಬೆಂಗಳೂರು, ಅಪರ ಆಯುಕ್ತರ ಕಛೇರಿ, ಧಾರವಾಡ ಮತ್ತು ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ.
11. ಶಾಖಾಧಿಕಾರಿಗಳು, ಗಣಕ ಶಾಖೆ ರವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ.